(45)

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಚಿದಾನಂದ ಎಂ. ಗೌಡ ರವರಿಂದ ನಿಯಮ-72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಪತ್ರುಕ್ಕೆ ಸರ್ಕಾರದ ಉತ್ತರ:-

**ವಿಷಯ:** ಗಡಿ ಜಿಲ್ಲೆಗಳು ಮತ್ತು ಗಡಿ ತಾಲ್ಲೂಕುಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ಆಯವ್ಯಯದಲ್ಲಿ ಹೆಚ್ಚಿನ ಅನುದಾನ ನೀಡುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಗೆ ಬರುವ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಮತ್ತು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ವಾರ್ಷಿಕವಾರು ಆಯವ್ಯಯದಲ್ಲಿ ಒದಗಿಸುವ ಅನುದಾನದ ಹಂಚಿಕೆಯಾಧಾರದ ಮೇಲೆ ಕ್ರಿಯಾ ಯೋಜನೆಯನ್ನು ರೂಪಿಸಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ 2010ರ ಅಧಿನಿಯಮದಂತೆ ರಾಜ್ಯದ ಗಡಿ 19 ಗಡಿ ಜಿಲ್ಲೆಗಳು ಹಾಗೂ 63 ಗಡಿ ತಾಲ್ಲೂಕುಗಳನ್ನೊಳಗೊಂಡಂತೆ ಮತ್ತು ಕನ್ನಡ ಅಭಿವೃದ್ಧಿ ಪ್ರಾಧಿಕಾರದಿಂದ ಗಡಿ ಭಾಗದಲ್ಲಿನ ಕನ್ನಡ ಶಾಲೆಗಳಲ್ಲಿ ಕನ್ನಡ ಮಾಧ್ಯಮ ಶಿಕ್ಷಣವನ್ನು ಪ್ರೋತ್ಸಾಹಿಸಲು ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಂಡು ಬಂದಿರುತ್ತವೆ.

ಪ್ರಸಕ್ತ ಸಾಲಿನಲ್ಲಿ ಕೋವಿಡ್-19ರ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ, ಆಯವ್ಯಯದಲ್ಲಿ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ರೂ.15.00ಕೋಟಿಗಳು ಮತ್ತು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ರೂ.2.00ಕೋಟಿಗಳ ಅನುದಾನ ಹಂಚಿಕೆಯಾಗಿರುವ ಹಿನ್ನೆಲೆಯಲ್ಲಿ, ಸದರಿ ಅನುದಾನಗಳಿಗೆ ತಕ್ಕಂತೆ ಕ್ರಿಯಾ-ಯೋಜನೆಯನ್ನು ತಯಾರಿಸಿ, ಇಲಾಖೆಯಿಂದ ಗಡಿ ಜಿಲ್ಲೆಗಳು ಮತ್ತು ಗಡಿ ತಾಲ್ಲೂಕುಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳನ್ನೊಳಗೊಂಡ ಕಾರ್ಯಕ್ರಮ/ಯೋಜನೆಗಳನ್ನು ರೂಪಿಸಿ, ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ:** ಕಸಂವಾ 123 ಕೆಒಎಲ್ ಆಕ 2021.

(ವಿ. ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.